**Akashvani : Bangalore**
**National Bulletin In Kannada**
**19.02.2025 / 7.35 am**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**19.02.2025 / 7.35 am**

**<><*<><>*><>**

ಮುಖ್ಯಾಂಶಗಳು

೧. ಕತಾರ್ ಹಾಗೂ ಭಾರತ ನಡುವಿನ ಸಂಬಂಧಕ್ಕೆ ಶತಮಾನಗಳ ಇತಿಹಾಸವಿದೆ- ರಾಷ್ಟ್ರಪತಿ ದ್ರೌಪದಿ ಮುರ್ಮು

೨. ನವದೆಹಲಿಯಲ್ಲಿ ಇಂದು ದೆಹಲಿ ಬಿಜೆಪಿ ಶಾಸಕಾಂಗ ಪಕ್ಷದ ಸಭೆ; ನೂತನ ಮುಖ್ಯಮಂತ್ರಿ ಆಯ್ಕೆ ಸಾಧ್ಯತೆ

೩. ಐಸಿಸಿ ಚಾಂಪಿಯನ್ಸ್ ಟ್ರೋಫಿ; ಉದ್ಘಾಟನಾ ಪಂದ್ಯದಲ್ಲಿ ಇಂದು ಪಾಕಿಸ್ತಾನ - ನ್ಯೂಜಿಲೆಂಡ್ ಸೆಣಸು

೪. ಮಹಿಳಾ ಪ್ರೀಮಿಯರ್ ಲೀಗ್; ಗುಜರಾತ್ ಜೈಂಟ್ಸ್ ವಿರುದ್ಧ ಮುಂಬೈ ಇಂಡಿಯನ್ಸ್‌ಗೆ ೫ ವಿಕೆಟ್‌ಗಳ ಜಯ

**<><*<><>*><>**

ಭಾರತ ಹಾಗೂ ಕತಾರ್ ನಡುವಿನ ವ್ಯೂಹಾತ್ಮಕ ಪಾಲುದಾರಿಕೆಯನ್ನು ಮತ್ತಷ್ಟು ಎತ್ತರಕ್ಕೆ ಕೊಂಡೊಯ್ಯುವ ಮೂಲಕ ಸಂಬಂಧಗಳ ಬಲವರ್ಧನೆಗೆ ಉಭಯ ದೇಶಗಳು ತೀರ್ಮಾನಿಸಿವೆ. ವ್ಯಾಪಾರ, ಇಂಧನ, ಹೂಡಿಕೆ, ನಾವೀನ್ಯತೆ, ತಂತ್ರಜ್ಞಾನ, ಆಹಾರ ಭದ್ರತೆ, ಸಂಸ್ಕೃತಿ ವಲಯ ಮತ್ತು ಜನರ ನಡುವಿನ ಸಂಬಂಧ ವೃದ್ಧಿಗೆ ಉಭಯ ದೇಶಗಳು ನಿರ್ಧರಿಸಿವೆ. ಕತಾರ್ ಜೊತೆಗಿನ ಭಾರತದ ಸಂಬಂಧಗಳು ಶತಮಾನಗಳಷ್ಟು ಹಳೆಯದಾದ ಇತಿಹಾಸ ಹೊಂದಿವೆ. ಕತಾರ್ ಪಶ್ಚಿಮ ಏಷ್ಯಾದ ವಾಣಿಜ್ಯ ಮತ್ತು ಸಾಂಸ್ಕೃತಿಕ ಸಂಬಂಧಗಳ ಅವಿಭಾಜ್ಯ ಭಾಗವಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ನಿನ್ನೆ ಸಂಜೆ ರಾಷ್ಟ್ರಪತಿ ಭವನದಲ್ಲಿ ಕತಾರ್ ಅಮೀರ್ ಶೇಖ್ ತಮೀಮ್ ಬಿನ್ ಹಮದ್ ಅಲ್ ಥಾನಿ ಅವರನ್ನು ಸ್ವಾಗತಿಸಿದ ರಾಷ್ಟ್ರಪತಿ, ಉಭಯ ದೇಶಗಳ ನಡುವಿನ ಸಂಬಂಧ ಮತ್ತು ಸಹಕಾರವು ಆಳವಾದ ಸೌಕರ್ಯ ಮತ್ತು ಸದ್ಭಾವನೆಯಿಂದ ಗುರುತಿಸಲ್ಪಟ್ಟಿದೆ ಎಂದು ತಿಳಿಸಿದರು. ವ್ಯಾಪಾರ, ಹೂಡಿಕೆ, ಆಹಾರ ಭದ್ರತೆ, ಆರೋಗ್ಯ, ಸಂಸ್ಕೃತಿ ಮತ್ತು ಇಂಧನದಲ್ಲಿ ಎರಡೂ ದೇಶಗಳು ವಿಶ್ವಾಸಾರ್ಹ ಪಾಲುದಾರಿಕೆ ಹೊಂದಿರುವುದಾಗಿ ರಾಷ್ಟ್ರಪತಿ ಈ ಸಂದರ್ಭದಲ್ಲಿ ವಿವರಿಸಿದರು. ನಾವೀನ್ಯತೆ, ತಂತ್ರಜ್ಞಾನ ಮತ್ತು ಸ್ಟಾರ್ಟ್-ಅಪ್‌ಗಳಲ್ಲಿ ಸಹಕಾರವನ್ನು ವಿಸ್ತರಿಸಲು ಭಾರತ ಮತ್ತು ಕತಾರ್ ಪರಸ್ಪರ ಸಾಮರ್ಥ್ಯಗಳನ್ನು ಬಳಸಿಕೊಳ್ಳಬೇಕು. ಭಾರತ ಮತ್ತು ಕತಾರ್ ಜನರಿಗೆ ಮಾತ್ರವಲ್ಲದೆ, ಪ್ರಪಂಚದ ಎಲ್ಲಾ ಜನರಿಗೆ ಶಾಂತಿ, ಪ್ರಗತಿ ಮತ್ತು ಸಮೃದ್ಧಿಗಾಗಿ ಎರಡೂ ರಾಷ್ಟ್ರಗಳು ಒಟ್ಟಾಗಿ ಕೆಲಸ ಮಾಡುವ ಮಹತ್ವವನ್ನು ಅವರು ಒತ್ತಿ ಹೇಳಿದರು.

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಮತ್ತು ಕತಾರ್ ಅಮೀರ್ ಶೇಖ್ ತಮೀಮ್ ಬಿನ್ ಹಮದ್ ಅಲ್ ಥಾನಿ ನಡುವಿನ ದ್ವಿಪಕ್ಷೀಯ ಮಾತುಕತೆಯ ಸಂದರ್ಭದಲ್ಲಿ, ಇಬ್ಬರೂ ನಾಯಕರು ಐತಿಹಾಸಿಕ ವ್ಯಾಪಾರ ಸಂಪರ್ಕಗಳು, ಮತ್ತು ಎರಡೂ ದೇಶಗಳ ನಡುವಿನ ಬಲವಾದ ದ್ವಿಪಕ್ಷೀಯ ಸಂಬಂಧಗಳನ್ನು ನೆನಪಿಸಿಕೊಂಡರು ಎಂದು ವಿದೇಶಾಂಗ ಸಚಿವಾಲಯದ ಸಿಬಿಪಿ ಮತ್ತು ಸಾಗರೋತ್ತರ ಭಾರತೀಯ ವ್ಯವಹಾರಗಳ ಕಾರ್ಯದರ್ಶಿ ಅರುಣ್ ಕುಮಾರ್ ಚಟರ್ಜಿ ಹೇಳಿದರು. ನವದೆಹಲಿಯಲ್ಲಿ ನಿನ್ನೆ ಸಂಜೆ ಮಾಧ್ಯಮಗಳಿಗೆ ಮಾಹಿತಿ ನೀಡಿದ ಅವರು, ಎರಡೂ ದೇಶಗಳ ನಡುವಿನ ಸಂಬಂಧವನ್ನು ಕಾರ್ಯತಂತ್ರದ ಪಾಲುದಾರಿಕೆಗೆ ಏರಿಸಲು, ಭಾರತ ಮತ್ತು ಕತಾರ್ ಒಪ್ಪಂದಕ್ಕೆ ಸಹಿ ಹಾಕಿವೆ. ವ್ಯಾಪಾರ, ಹೂಡಿಕೆ ಮತ್ತು ಇಂಧನವು ಇಬ್ಬರು ನಾಯಕರ ನಡುವಿನ ಚರ್ಚೆಯ ಪ್ರಮುಖ ವಿಷಯಗಳಲ್ಲಿ ಸೇರಿವೆ ಎಂದು ಚಟರ್ಜಿ ಹೇಳಿದರು.

ಧ್ವನಿ: ಅರುಣ್ ಕುಮಾರ್ ಚಟರ್ಜಿ, ಸಾಗೋರತ್ತರ ವ್ಯವಹಾರಗಳ ಕಾರ್ಯದರ್ಶಿ

**<><*<><>*><>**

ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಮತ್ತು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ. ನಡ್ಡಾ, ನವದೆಹಲಿಯಲ್ಲಿ ನಿನ್ನೆ ಕತಾರ್‌ನ ಅಮೀರ್ ಶೇಖ್ ತಮೀಮ್ ಬಿನ್ ಹಮದ್ ಅಲ್ ಥಾನಿ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದರು.  ಈ ವೇಳೆ ಸಚಿವ ಜೆ.ಪಿ.ನಡ್ಡಾ, ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಭಾರತದ ಆರೋಗ್ಯ ಕ್ಷೇತ್ರದಲ್ಲಾಗಿರುವ ಪ್ರಗತಿಯ ಕುರಿತು ಮಾಹಿತಿ ನೀಡಿದರು. ಆರೋಗ್ಯ ಸೇವೆ ಮತ್ತು ಕೈಗೆಟುಕುವ ವೈದ್ಯಕೀಯ ಆರೈಕೆಯನ್ನು ಒದಗಿಸುವಲ್ಲಿ ಸರ್ಕಾರದ ಪ್ರಯತ್ನಗಳನ್ನು ವಿವರಿಸಿದರು.  ಆರೋಗ್ಯ ಮತ್ತು ಔಷಧೀಯ ಕ್ಷೇತ್ರಗಳಲ್ಲಿ ಕತಾರ್ ಮತ್ತು ಭಾರತದ ನಡುವಿನ ಸಹಯೋಗದ ಅವಕಾಶಗಳ ಕುರಿತು ಸಚಿವರು ಪ್ರಸ್ತಾಪಿಸಿದರು. ಈ ಸಂದರ್ಭದಲ್ಲಿ ಕತಾರ್‌ನಲ್ಲಿರುವ ಭಾರತೀಯ ವಲಸಿಗರಿಗೆ ಬೆಂಬಲ ನೀಡಿದ್ದಕ್ಕಾಗಿ ಅವರು ಶೇಖ್ ಥಾನಿಗೆ ಧನ್ಯವಾದ ಅರ್ಪಿಸಿದರು.

<><*<><>*><>

ಪ್ರಯಾಗರಾಜ್‌ನಲ್ಲಿ ನಡೆಯುತ್ತಿರುವ ಮಹಾ ಕುಂಭ ಮೇಳವು ಇದೇ ೨೬ಕ್ಕೆ ಅಂತ್ಯಗೊಳ್ಳಲಿದ್ದು, ಮೇಳವನ್ನು ವಿಸ್ತರಿಸುವ ಕುರಿತು ಇರುವ ವದಂತಿಗಳನ್ನು ಉತ್ತರ ಪ್ರದೇಶ ಸರ್ಕಾರ ಮತ್ತು ಮಹಾಕುಂಭ ಮೇಳ ಪ್ರಾಧಿಕಾರವು ನಿರಾಕರಿಸಿದೆ. ಸಾಮಾಜಿಕ ಮಾಧ್ಯಮದಲ್ಲಿ ವ್ಯಾಪಕವಾಗಿ ಹರಡುತ್ತಿರುವ ವದಂತಿಯು ನಿರಾಧಾರವಾದುದು ಎಂದು ಪ್ರಯಾಗರಾಜ್ ಜಿಲ್ಲಾ ಮ್ಯಾಜಿಸ್ಟ್ರೇಟ್ ರವೀಂದ್ರ ಮಂಧಾಡ್ ಸ್ಪಷ್ಟಪಡಿಸಿದ್ದಾರೆ.

<><*<><>*><>

ನವದೆಹಲಿಯಲ್ಲಿ ಇಂದು ದೆಹಲಿ ಬಿಜೆಪಿ ಶಾಸಕಾಂಗ ಪಕ್ಷದ ಸಭೆ ನಡೆಯಲಿದೆ. ನೂತನವಾಗಿ ಆಯ್ಕೆಯಾಗಿರುವ ಎಲ್ಲ ಬಿಜೆಪಿ ಶಾಸಕರು ಹಾಗೂ ಹಿರಿಯ ನಾಯಕರು ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ದೆಹಲಿಯ ನೂತನ ಮುಖ್ಯಮಂತ್ರಿ ಆಯ್ಕೆ ವಿಚಾರ ಸಭೆಯಲ್ಲಿ ಅಂತಿಮಗೊಳ್ಳುವ ಸಾಧ್ಯತೆಗಳಿವೆ ಎಂದು ಪಕ್ಷದ ಮೂಲಗಳು ತಿಳಿಸಿವೆ. ಮುಂದಿನ ಮುಖ್ಯಮಂತ್ರಿಯ ಪ್ರಮಾಣ ವಚನ ಸ್ವೀಕಾರ ಸಮಾರಂಭ ರಾಷ್ಟ್ರ ರಾಜಧಾನಿಯ ರಾಮಲೀಲ ಮೈದಾನದಲ್ಲಿ ಗುರುವಾರ ನಡೆಯುವ ನಿರೀಕ್ಷೆಯಿದೆ. ಒಟ್ಟು ೭೦ ಸದಸ್ಯ ಬಲದ ದೆಹಲಿಯ ವಿಧಾನಸಭೆಗೆ ಇತ್ತೀಚಿಗೆ ನಡೆದ ಚುನಾವಣೆಯಲ್ಲಿ ಬಿಜೆಪಿ ೪೮ ಸ್ಥಾನಗಳಲ್ಲಿ ಭರ್ಜರಿ ಗೆಲವು ಸಾಧಿಸಿತ್ತು.

<><*<><>*><>

ನವದೆಹಲಿ ರೈಲು ನಿಲ್ದಾಣದ ಕಾಲ್ತುಳಿತದ ಕುರಿತು ಉನ್ನತ ಮಟ್ಟದ ಸಮಿತಿಯು ನಡೆಸುತ್ತಿರುವ ವಿಚಾರಣೆಯನ್ನು ಹೊರತುಪಡಿಸಿ ಯಾವುದೇ ತನಿಖೆ ನಡೆಸುತ್ತಿಲ್ಲ ಎಂದು ರೈಲ್ವೆ ಸಚಿವಾಲಯ ಸ್ಪಷ್ಟಪಡಿಸಿದೆ.  ಘಟನೆಯ ಕುರಿತು ಆರ್‌ಪಿಎಫ್ ವಿಚಾರಣಾ ವರದಿ ಎಂದು ಉಲ್ಲೇಖಿಸಲಾದ ಕೆಲವು ಮಾಧ್ಯಮ ವರದಿಗಳು ಜನಗಳ ದಾರಿತಪ್ಪಿಸುತ್ತಿವೆ ಎಂದು ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ಈ ನಿಟ್ಟಿನಲ್ಲಿ ಉನ್ನತ ಮಟ್ಟದ ಸಮಿತಿಯ ಅಂತಿಮ ವರದಿಗಾಗಿ ಕಾಯುವಂತೆ sಸಚಿವಾಲಯ ತಿಳಿಸಿದೆ. ಘಟನೆಯ ಕುರಿತು ಯಾವುದೇ ಮಾಹಿತಿಯಿದ್ದರೆ, pccmnr25@gmail.com ಮತ್ತು pcsc@nr.railnet.gov.in ಗೆ ಇಮೇಲ್ ಮೂಲಕ ಸಮಿತಿಯ ಸದಸ್ಯರೊಂದಿಗೆ ನೇರವಾಗಿ ಸಂವಹನ ನಡೆಸಬಹುದು ಎಂದು ಸಚಿವಾಲಯ ತಿಳಿಸಿದೆ. ಘಟನೆಯ ತನಿಖೆಗಾಗಿ ಉತ್ತರ ರೈಲ್ವೆ ಈಗಾಗಲೇ ಇಬ್ಬರು ಸದಸ್ಯರ ಉನ್ನತ ಮಟ್ಟದ ಸಮಿತಿಯನ್ನು ಸ್ಥಾಪಿಸಿದೆ. ಸಮಿತಿಯು ೧೦೦ ಕ್ಕೂ ಹೆಚ್ಚು ವೈಯಕ್ತಿಕ ಹೇಳಿಕೆಗಳನ್ನು ಸಂಗ್ರಹಿಸುತ್ತಿದೆ. ಅಂತಹ ಎಲ್ಲಾ ಹೇಳಿಕೆಗಳನ್ನು ಸ್ವೀಕರಿಸಿದ ನಂತರ, ಸಮಿತಿಯು ತನಿಖಾ ವರದಿಯನ್ನು ಸಲ್ಲಿಸುತ್ತದೆ ಎಂದು ರೈಲ್ವೆ ಸಚಿವಾಲಯ ಹೇಳಿದೆ.

<><*<><>*><>

ಒಂಬತ್ತನೇ ಆವೃತ್ತಿಯು ಐಸಿಸಿ ಚಾಂಪಿಯನ್ಸ್ ಟ್ರೋಫಿ ೨೦೨೫ ಇಂದಿನಿಂದ ಆರಂಭವಾಗಲಿದ್ದು, ಆತಿಥೇಯ ಪಾಕಿಸ್ತಾನ ತಂಡ ಕರಾಚಿಯಲ್ಲಿ ಇಂದು ನಡೆಯಲಿರುವ ಉದ್ಘಾಟನಾ ಪಂದ್ಯದಲ್ಲಿ ನ್ಯೂಜಿಲೆಂಡ್ ತಂಡವನ್ನು ಎದುರಿಸಲಿದೆ. ಈ ಪಂದ್ಯವು ಭಾರತೀಯ ಕಾಲಮಾನ ಮಧ್ಯಾಹ್ನ ೨:೩೦ ಕ್ಕೆ ಆರಂಭವಾಗಲಿದೆ. ರೋಹಿತ್ ಶರ್ಮಾ ನೇತೃತ್ವದ ಭಾರತ ತಂಡವು ನಾಳೆ ದುಬೈ ಅಂತರರಾಷ್ಟ್ರೀಯ ಕ್ರೀಡಾಂಗಣದಲ್ಲಿ ಬಾಂಗ್ಲಾದೇಶ ವಿರುದ್ಧ ತನ್ನ ಅಭಿಯಾನವನ್ನು ಪ್ರಾರಂಭಿಸಲಿದೆ. ಎಂಟು ಅಗ್ರ ಶ್ರೇಯಾಂಕಿತ ಏಕದಿನ ಅಂತರರಾಷ್ಟ್ರೀಯ ತಂಡಗಳನ್ನು ಒಳಗೊಂಡ ಈ ಪಂದ್ಯಾವಳಿಯು ಪಾಕಿಸ್ತಾನ ಮತ್ತು ಯುಎಇ ಯಲ್ಲಿ ನಡೆಯಲಿದೆ. ಮುಂದಿನ ತಿಂಗಳು ೯ ರಂದು ಫೈನಲ್ ಪಂದ್ಯ ನಡೆಯಲಿದೆ. ಎ ಗುಂಪಿನಲ್ಲಿ, ನ್ಯೂಜಿಲೆಂಡ್ ಭಾರತ, ಬಾಂಗ್ಲಾದೇಶ ಮತ್ತು ಆತಿಥೇಯ ಪಾಕಿಸ್ತಾನವನ್ನು ತಂಡಗಳಿವೆ.  ಬಿ ಗುಂಪಿನಲ್ಲಿ ಅಫ್ಘಾನಿಸ್ತಾನ, ಆಸ್ಟ್ರೇಲಿಯಾ, ಇಂಗ್ಲೆಂಡ್ ಮತ್ತು ದಕ್ಷಿಣ ಆಫ್ರಿಕಾವನ್ನು ತಂಡಗಳಿವೆ.

**<><*<><>*><>**

ಗುಜರಾತ್‌ನ ವಡೋದರಾದಲ್ಲಿ ಕಳೆದ ರಾತ್ರಿ ನಡೆದ ಡಬ್ಲ್ಯೂಪಿಎಲ್ ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ತಂಡ, ಗುಜರಾತ್ ಜೈಂಟ್ಸ್ ತಂಡದ ವಿರುದ್ಧ ೫ ವಿಕೆಟ್‌ಗಳಿಂದ ಜಯ ಸಾಧಿಸಿದೆ. ಮೊದಲು ಬ್ಯಾಟ್ ಮಾಡಿದ ಗುಜರಾತ್ ಜೈಂಟ್ಸ್, ನಿಗದಿತ ೨೦ ಓವರ್‌ಗಳಲ್ಲಿ ತನ್ನೆಲ್ಲಾ ವಿಕೆಟ್ ಕಳೆದುಕೊಂಡು ೧೨೦ ರನ್ ಗಳಿಸಿತು. ಗುಜರಾತ್ ಪರ ಹರ್ಲೀನ್ ಡಿಯೋಲ್ ೩೨, ಕಾಶ್ವೀ ಗೌತಮ್ ೨೦ ರನ್ ಗಳಿಸಿದರು. ಮುಂಬೈ ಪರ ಹೈಲೀ ಮ್ಯಾಥ್ಯೂಸ್ ೩, ಅಮೆಲಿಯಾ ಕೆರ್ ಹಾಗೂ ನಾಟ್ ಸ್ಕಿವರ್ ಬ್ರಂಟ್ ತಲಾ ೨ ವಿಕೆಟ್ ಪಡೆದರು. ೧೨೧ ರನ್ ಗಳ ಸಾಧಾರಣ ಗುರಿ ಬೆನ್ನತ್ತಿದ ಮುಂಬೈ ನಾಟ್ ಸ್ಕಿವರ್ ಬ್ರಂಟ್ ಅವರ ಆಕರ್ಶಕ ಅರ್ಧ ಶತಕದ ನೆರವಿನಿಂದ ೧೬.೧ ಓವರ್‌ಗಳಲ್ಲೇ ಗುರಿ ತಲುಪಿತು. ತಂಡದ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದ ಹೈಲೀ ಮ್ಯಾಥ್ಯೂಸ್ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ವಡೋದರಾದಲ್ಲಿ ಇಂದು ನಡೆಯುವ ಪಂದ್ಯದಲ್ಲಿ ಯುಪಿ ವಾರಿಯರ್ಸ್ ಮತ್ತು  ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭:೩೦ ಕ್ಕೆ ಆರಂಭವಾಗಲಿದೆ.

**<><*<><>*><>**

೩೪ ನೇ ಆವೃತ್ತಿಯ ITTF-ATTU ಏಷ್ಯನ್ ಕಪ್ ಟೇಬಲ್ ಟೆನಿಸ್ ಪಂದ್ಯಾವಳಿ ಇಂದು ಚೀನಾದ ಶೆನ್ಜೆನ್‌ನಲ್ಲಿ ಆರಂಭವಾಗಲಿದೆ. ಭಾರತದ ಪುರುಷರ ತಂಡವನ್ನು ಐದು ಬಾರಿ ಒಲಿಂಪಿಯನ್ ಮತ್ತು ಹಾಲಿ ಕಾಮನ್‌ವೆಲ್ತ್ ಕ್ರೀಡಾಕೂಟದ ಸಿಂಗಲ್ಸ್ ಚಾಂಪಿಯನ್ ಆಗಿರುವ ವಿಶ್ವದ ೪೨ ನೇ ಶ್ರೇಯಾಂಕಿತ ಶರತ್ ಕಮಲ್ ಮುನ್ನಡೆಸುತ್ತಿದ್ದಾರೆ. ತಂಡದಲ್ಲಿ ವಿಶ್ವದ ೬೦ ನೇ ಶ್ರೇಯಾಂಕಿತ ಮಾನವ್ ಥಕ್ಕರ್ ಮತ್ತು ೭೦ ನೇ ಶ್ರೇಯಾಂಕಿತ ಹರ್ಮೀತ್ ದೇಸಾಯಿ ಕೂಡ ಇದ್ದಾರೆ. ಭಾರತದ ಮಹಿಳಾ ತಂಡದಲ್ಲಿ ಪ್ಯಾರಿಸ್ ೨೦೨೪ ರ ಒಲಿಂಪಿಯನ್ ಶ್ರೀಜಾ ಅಕುಲಾ, ಐಹಿಕಾ ಮುಖರ್ಜಿ ಮತ್ತು ಯಶಸ್ವಿನಿ ಘೋರ್ಪಡೆ ಇರಲಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>**